SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

SDUAHER

UINIVERSITY LIBRARY & LEARNING RESOURCE CENTRE

Online Newspaper Clipping Service
**Dated, Wednesday 01st March – 2017**

ವಿಜಯವಾಣಿ

**Pg.No.04**

# ಆರೋಗ್ಯ ತಪಾಸಣಾ ಶಿಬಿರ ಇಂದು

ಮುಳಬಾಗಿಲು: ತಾಲೂಕಿನ ಎಮ್ಮೇನತ್ತ ಗ್ರಾಮದ ಅಂಜನಾದ್ರಿ ಪ್ರೌಢಶಾಲೆ ಆವರಣದಲ್ಲಿ ಮಾ.1ರಂದು ಬೆಳಗ್ಗೆ 10ರಿಂದ ಸಂಜೆ 3ರವರೆಗೂ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ರೋಟರಿ ಮುಳಬಾಗಿಲು ಸೆಂಟ್ರಲ್ ಆರ್.ಎಲ್.ಜಾಲಪ್ಪ ಆಸ್ಪತ್ರೆ ಸಂಶೋಧನಾಕೇಂದ್ರ, ನಾರಾಯಣಹೃದಯಾಲಯ, ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯ ಕೋಲಾರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದೆ. ಸುತ್ತಮುತ್ತಲ ನಾಗರಿಕರು ಶಿಬಿರದ ಸೇವೆಯನ್ನು ಉಪಯೋಗಿಸಿಕೊಳ್ಳಬೇಕೆಂದು ರೋಟರಿ ಅಧ್ಯಕ್ಷ ಎಂ.ಎಸ್.ಶ್ರೀನಿವಾಸರೆಡ್ಡಿ ಕೋರಿದ್ದಾರೆ.

# ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಸರ್ಕಾರಿ ವೈದ್ಯ ಕಾಲೇಜು



ಉಡುಪಿ: ವೈದ್ಯಕೀಯ ಸೀಟುಗಳನ್ನು ಹೆಚ್ಚಿಸಿ ಮೆರಿಟ್ ಆಧಾರದಲ್ಲಿ ಸೀಟು ಲಭ್ಯತೆಗೆ ಅನುಕೂಲವಾಗುವಂತೆ ಹಾಗೂ ಗ್ರಾಮೀಣ ಬಡಜನತೆಗೆ ಗುಣಮಟ್ಟದ ವೈದ್ಯಕೀಯ ಸೇವೆ ಲಭಿಸುವಂತಾಗಲು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸಲು ಸರ್ಕಾರ ನಿರ್ಧರಿಸಿದೆ ಎಂದು ರಾಜ್ಯ ವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಹೇಳಿದರು.

ಮಣಿಪಾಲ ವಿ.ವಿ. ಅಲೈಡ್ ಹೆಲ್ತ್‌ಸೈನ್ಸ್ ಆಶ್ರಯದಲ್ಲಿ ಮಂಗಳವಾರ ನಡೆದ ಫಿಸಿಯೊಥೆರಪಿ ಸಮ್ಮೇಳನ ಪೂರ್ವ ಕಾರ್ಯಾಗಾರ ಸಿಯೊಕಾನ್ ಉದ್ಘಾಟಿಸಿ, ಬಳಿಕ ಸುದ್ದಿಗಾರರೊಂದಿಗೆ ಮಾತ ನಾಡಿದರು. ಪ್ರಸಕ್ತ ವರ್ಷದಲ್ಲಿ ಗುಲ್ಬರ್ಗ, ಕೊಪ್ಪಳ, ಗದಗ, ಚಾಮರಾಜನಗರ, ಕೊಡಗು ಮತ್ತು ಕಾರವಾರಗಳಲ್ಲಿ ಹೊಸ ಸರ್ಕಾರಿ ಮೆಡಿಕಲ್ ಕಾಲೇಜು ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದೆ. ಇನ್ನೂ 6 ಜಿಲ್ಲೆಗಳಲ್ಲಿ ಆರಂಭಿಸುವ ಬಗ್ಗೆ ಆರ್ಥಿಕ ಇಲಾಖೆಗೆ ವಿನಂತಿಸಲಾಗಿದೆ. ಬಾಗಲಕೋಟೆ, ಹಾವೇರಿ, ಚಿತ್ರದುರ್ಗ, ತುಮಕೂರು ಮತ್ತು ಚಿಕ್ಕಬಳ್ಳಾಪುರ ಮೊದಲಾದ ಜಿಲ್ಲೆಗಳು ಸೇರಿವೆ. ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಬೇಡಿಕೆ ಪ್ರಸ್ತಾವನೆ ಬಂದಿಲ್ಲ ಎಂದರು.

ಇನ್ನೂ ಕೆಲವು ಕಡೆಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುವ ಸರ್ಕಾರಿ ಜಿಲ್ಲಾಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ಅವುಗಳನ್ನೇ ಮೆಡಿಕಲ್ ಕಾಲೇಜುಗಳಾಗಿ ಪರಿವರ್ತಿಸಲಾಗುವುದು ಎಂದರು.

**ಆಸ್ಪತ್ರೆಗಳ ಶಾಖೆ ಆರಂಭ**

ಈಮಧ್ಯೆ, ಗುಲ್ಬರ್ಗಾದಲ್ಲಿ ಜಯದೇವ ಆಸ್ಪತ್ರೆಯ ಶಾಖೆಯನ್ನು ಪ್ರಾಯೋಗಿಕವಾಗಿ ಆರಂಭಿಸಲಾಗಿದೆ. ಜಯದೇವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಯಸುವ ರೋಗಿಗಳಿಗೆ ಬೆಂಗಳೂರಿಗೆ ಬರುವುದು ತಪ್ಪುತ್ತದೆ. ಈ ವ್ಯವಸ್ಥೆ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದು ಮೈಸೂರಿನಲ್ಲಿ ಕೂಡಾ ಇಂಥದೇ ಕೇಂದ್ರ ತೆರೆಯಲು ಯೋಚಿಸಲಾಗಿದೆ. ಗುಲ್ಬರ್ಗಾದಲ್ಲಿ ಕಿದ್ವಾಯಿ ಆಸ್ಪತ್ರೆ ಶಾಖೆಯನ್ನು ತೆರೆಯಲು ಉದ್ದೇಶಿಸಲಾಗಿದೆ. ಹುಬ್ಬಳ್ಳಿ ಮತ್ತು ಬಳ್ಳಾರಿಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಲಾಗುವುದು. ಗುಲ್ಬರ್ಗ ಮತ್ತು ಮೈಸೂರುಗಳಲ್ಲಿ ಟ್ರಾಮಾ ಸೆಂಟರ್ ಕಾಮಗಾರಿ ಪ್ರಗತಿಯಲ್ಲಿದೆ. ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ಮೆಡಿಕಲ್ ಕಾಲೇಜಾಗಿ ಪರಿವರ್ತಿಸಲಾಗುವುದು ಮತ್ತು ವಿಕ್ಟೋರಿಯಾ ಆಸ್ಪತ್ರೆಯಲ್ಲಿ 100 ಹಾಸಿಗೆಗಳುಳ್ಳ ಟ್ರಾಮಾ ಸೆಂಟರ್ ತೆರೆಯಲಾಗುವುದು ಎಂದರು.

ಮಣಿಪಾಲ ವಿ.ವಿ. ಸಹಕುಲಾಧಿಪತಿ ಡಾ. ಎಚ್.ಎಸ್. ಬಲ್ಲಾಳ್, ಕುಲಪತಿ ಡಾ. ವಿನೋದ ಭಟ್, ಉಪಕುಲಪತಿ ಡಾ. ಸುರೇಂದ್ರ ಶೆಟ್ಟಿ, ಕುಲಸಚಿವ ಡಾ. ನಾರಾಯಣ ಸಭಾಹಿತ್, ಕರ್ನಾಟಕ ಫಿಸಿಯೊಥೆರಪಿ ಫೆಡರೇಶನ್ ರಾಜ್ಯಾಧ್ಯಕ್ಷ ಡಾ. ಇಫ್ತೆಕರ್ ಅಲಿ, ಅಲೈಡ್ ಹೆಲ್ತ್‌ಸೈನ್ಸ್ ಪ್ರಾಂಶುಪಾಲೆ ಡಾ. ವೈಶಾಲಿ ಇದ್ದರು.